# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರ ಕಛೇರಿ ಶಿವಾಜಿನಗರ ಉಪವಿಭಾಗ ಹಲಸೂರು ಕೆರೆರಸ್ತೆ, ಬೆಂಗಳೂರು-42**

---

ಸಂಖ್ಯೆ:ಸ.ಇಂ/ವಾ-91/ವಾರ್ಡ್‌ಸಭೆ/ 03 /2022-23 ದಿನಾಂಕ:21-06-2022

## ವಾರ್ಡ್-91 ರ ವಾರ್ಡ್ ಸಭೆಯ ನಡವಳ

ದಿನಾಂಕ: 26-06-2022 ರಂದು ಶಿವಾಜಿನಗರ ಉಪ ವಿಭಾಗ ವಾರ್ಡ್-91, ಭಾರತಿನಗರ ವಾರ್ಡ್ ಕಛೇರಿಯಲ್ಲಿ ಶ್ರೀ.ರವಿ, ವಾರ್ಡ್-91 ರ ನೋಡಲ್ ಅಧಿಕಾರಿಯವರ ಅಧ್ಯಕ್ಷತೆಯಲ್ಲಿ ನಡೆದ ವಾರ್ಡ್ ಸಮಿತಿ ಸಭಾ ನಡವಳ.

**ಹಾಜರಿದ್ದವರು:**

| ಕ್ರಮ ಸಂಖ್ಯೆ | ಸದಸ್ಯರ ಹೆಸರು | ಪದನಾಮ / ಇಲಾಖೆ |
|---|---|---|
| 1 | ಶ್ರೀ ರವಿ | ಸಹಾಯಕ ನಿಯಂತ್ರಕರು (ಹಣಕಾಸು-ದಕ್ಷಿಣ) ಹಾಗೂ ನೋಡಲ್ ಅಧಿಕಾರಿ ವಾರ್ಡ್-91 |
| 2 | ಶ್ರೀ ಬೀಮಾನಾಯ್ಕ | ಸಕಾನಿಅ ಶಿವಾಜಿನಗರ ಉಪ ವಿಭಾಗ |
| 3 | ಶ್ರೀಮತಿ ಜ್ಯೋತಿಲಕ್ಷ್ಮೀ | ಸ.ಕ.ಅ(ಶಿವಾಜಿನಗರ) |
| 4 | ಶ್ರೀ ಪ್ರವೀಣ್.ಎನ್.ಎಂ, | ಸಅ ಹಾಗೂ ಕಾರ್ಯದರ್ಶಿ ಮತ್ತು ಸಂಚಾಲಕರು ವಾರ್ಡ್ ಸಂಖ್ಯೆ:91 |
| 5 | ಶ್ರೀ ಜಾವೀದ್ | ಸಕಾನಿಅ(ಘ.ತ್ಯಾ.ನಿ) ಶಿವಾಜಿನಗರ ವಿಭಾಗ (ಪ್ರಭಾರೆ) |
| 6 | ಶ್ರೀ ಸತೀಶ್, | ಕಂದಾಯ ಪರಿವೀಕ್ಷಕರು |
| 7 | ಶ್ರೀ ರಾಜೇಶ್, | ಸ.ಅ(ಬಿ.ಡಬ್ಲ್ಯೂ.ಎಸ್.ಎಸ್.ಬಿ) |
| 8 | ಶ್ರೀ ಲಕ್ಷ್ಮಣ್, | ಸ.ಅ(ಬೆಸ್ಕಾಂ) |
| 9 | ಶ್ರೀ ಕಾರ್ತಿಕ್ | ಕಿರಿಯ ಆರೋಗ್ಯ ಪರಿವೀಕ್ಷಕರು |

**ಮಾನ್ಯ ನೋಡಲ್ ಅಧಿಕಾರಿರವರು ಸ್ವಾಗತದೊಂದಿಗೆ ಅಧಿಕಾರಿಗಳ / ಹಾಜರಿದ್ದವರ ಪರಸ್ಪರ ಪರಿಚಯದೊಂದಿಗೆ ಸಭೆಯನ್ನು ಪ್ರಾರಂಭಿಸಲಾಯಿತು.**

1) **ಕೋವಿಡ್-19 ಸಾಂಕ್ರಾಮಿಕ ರೋಗದ ಬಗ್ಗೆ:** ಶಿವಾಜಿನಗರ ಉಪ ವಿಭಾಗದ ವಾರ್ಡ್ ಸಂಖ್ಯೆ:91ರ ವ್ಯಾಪ್ತಿಯಲ್ಲಿ ಸಾರ್ವಜನಿಕರ ಆರೋಗ್ಯ ಕೇಂದ್ರದ ವೈಧ್ಯಾಧಿಕಾರಿಗಳು ಕೋವಿಡ್ ಪರೀಕ್ಷೆಯ ವಿವರಗಳನ್ನು ಸಭೆಗೆ ನೀಡಿರುತ್ತಾರೆ. ಮತ್ತು ಬಿಬಿಎಂಪಿ ಎಸ್‌ಡಬ್ಲ್ಯೂಎಂ ಸಿಬ್ಬಂದಿರವರಿಗೆ ಮತ್ತು ಸಾರ್ವಜನಿಕರಿಗೆ 3ನೇ ಡೋಸ್ ಲಸಿಕೆಯನ್ನು ಅನ್ನು ಪಡೆಯಲು ಕ್ರಮವಹಿಸಲು ತಿಳಿಸಿರುತ್ತಾರೆ.

- ದಿನಾಂಕ:10-07-2022 ರಂದು ಬಕ್ರೀದ್ ಹಬ್ಬ ಇರುವುದರಿಂದ ಪೂರ್ಣ ರೀತಿಯಲ್ಲಿ ವ್ಯವಸ್ಥೆ ಮಾಡಿಕೊಳ್ಳತಕ್ಕದ್ದು, ಮತ್ತು ಸಾರ್ವಜನಿಕರಿಗೆ Animal Waste Bag ನೀಡಲು ಘನತ್ಯಾಜ್ಯ ರವರಿಗೆ ತಿಳಿಸಿರುತ್ತಾರೆ.

**ಶಿವಾಜಿನಗರ ಉಪ ವಿಭಾಗ (ಘನತ್ಯಾಜ್ಯ)**

- ವಾರ್ಡಿನಲ್ಲಿ ತಳ್ಳುವ ಗಾಡಿಗಳ ಕೊರತೆ ಇದ್ದು, ಸರಿಯಾಗಿ ಕಸ ವಿಲೇವಾರಿಯಾಗುತಿಲ್ಲದಿರುವುದು ಕಂಡು ಬಂದಿದ್ದು ಇದರ ಬಗ್ಗೆ ಸಾರ್ವಜನಿಕರಿಂದ ಸಾಕಷ್ಟು ದೂರು ಬಂದಿರುತ್ತದೆ ಹಾಗೂ ಪೌರಕಾರ್ಮಿಕರನ್ನು ವಿಚಾರಿಸಿದ್ದಲ್ಲಿ ಅವರಿಗೆ ತಳ್ಳುವ ಗಾಡಿ (Push Cart) ಕೊರತೆ ಇರುವುದು ಕಂಡುಬಂದಿರುತ್ತದೆ. ಆದ್ದುದರಿಂದ ಆದಷ್ಟು ಬೇಗ ಇವರಿಗೆ ತಳ್ಳುವ ಗಾಡಿ (Push Cart) ನೀಡಲು ಸೂಚಿಸಿದೆ.

- ಮೇಮೋರಿಯಲ್ ಪಾರ್ಕ್ ಅನ್ನು ಸೂಕ್ತ ರೀತಿಯಲ್ಲಿ ನಿರ್ವಹಣಾ ಕಾರ್ಯವನ್ನು ನಿರ್ವಹಿಸಲು ತೋಟಗಾರಿಕಾ ಇಲಾಖೆರವರಿಗೆ ತಿಳಸಲು ಸೂಚಿಸಿರುತ್ತಾರೆ.

**(ಅಧೀಕ್ಷಕ, ತೋಟಗಾರಿಕ ಇಲಾಖೆ)**

- ಬಿಬಿಎಂಪಿ ಆರೋಗ್ಯ ಇಲಾಖೆ ಕ್ವಾಡ್ರೆಂಟ್ ಸರ್ಕಲ್, ಭಾರತಿನಗರದಲ್ಲಿರುವ ಆರೋಗ್ಯ ಇಲಾಖೆಯ ಬಿಬಿಎಂಪಿ ಕಟ್ಟಡವನ್ನು ನವೀಕರಿಸಲು ಪರಿಶೀಲಿಸಿ ಕ್ರಮ ಜರೂಗಿಸಲು ತಿಳಿಸಿರುತ್ತಾರೆ.

**ಸಹಾಯಕ ಕಾರ್ಯಪಾಲಕ ಅಭಿಯಂತರರು (ಶಿವಾಜಿನಗರ) ಉಪ ವಿಭಾಗ)**

- ಕಸ ವಿಲೇವಾರಿ ಸಮಯಕ್ಕೆ ಹೋದರು ಕೂಡ ಕೆಲವೊಂದು ಕಡೆ ಸಾರ್ವಜನಿಕರಿಂದ ಒಳ್ಳೆಯ ರೀತಿಯ ಸ್ಪಂದನೆ ಇರುವುದಿಲ್ಲ ಆದ್ದರಿಂದ ಸಾರ್ವಜನಿಕರಿಗೆ ಸ್ವಚ್ಛತ್ತ ಕಾರ್ಯದ ಬಗ್ಗೆ ಅರಿವು ಮೂಡಿಸಲು ಸ್ವಚ್ಚತೆಯನ್ನು ಕಾಪಾಡಲು ಮತ್ತು ಪ್ರಚಾರ ಮಾಡಲು ತಿಳಿಸಿರುತ್ತಾರೆ.

**ಸಹಾಯಕ ಕಾರ್ಯಪಾಲಕ ಅಭಿಯಂತರರು (ಘನತ್ಯಾಜ್ಯ)**

- ಪೆಡಿಗ್ರಿವ್ ಸ್ಟ್ರೀಟ್‌ನಲ್ಲಿರುವ ಟ್ರಾನ್ಸ್‌ಫಾರ್ಮರ್ ಸುತ್ತ ಬೇಲಿಯನ್ನು ಹಾಕಲು ಬೆಸ್ಕಾಂ ರವರಿಗೆ ಸೂಕ್ತ ಕ್ರಮವಹಿಸಲು ತಿಳಿಸಿರುತ್ತಾರೆ.

<u>**ಬೆಸ್ಕಾಂ (ಶಿವಾಜಿನಗರ)**</u>

- ಮಳೆಯಿಂದ ಹಾನಿಗೊಳಗಾಗುವ ಪ್ರದೇಶವನ್ನು ತುರ್ತಾಗಿ ಸರಿಪಡಿಸಲು ಕ್ರಮವಹಿಸಲು ತಿಳಿಸಿರುತ್ತಾರೆ.
- ವಾರ್ಡ್ ಪ್ರದೇಶದ ರಸ್ತೆಗಳಲ್ಲಿ ಮತ್ತು ಪಾದಚಾರಿ ರಸ್ತೆಗಳಲ್ಲಿ ಮಣ್ಣು ಮತ್ತು ಅನುಪಯುಕ್ತ ಡೆಬ್ರೀಸ್‌ನ್ನು ರಾತ್ರಿ ಹೊತ್ತಿನಲ್ಲಿ ಸುರಿಯುತ್ತಿದ್ದು, ಇದರಿಂದ ಸಾರ್ವಜನಿಕರಿಗೆ ಹಾಗೂ ಪಾದಚಾರಿಗಳಗೆ ಒಡಾಡಲು ತುಂಬಾ ತೊಂದರೆಯುಂಟಾಗುತ್ತಿರುತ್ತದೆ, ಆದುದರಿಂದ ಸದರಿ ಮಣ್ಣು ಮತ್ತು ಅನುಪಯುಕ್ತ ಡೆಬ್ರೀಸನ್ನು ತೆರವುಗೊಳಸಲು ಅವಶ್ಯ ಕ್ರಮ ಕೈಗೊಳ್ಳಲು ಕೋರಿರುತ್ತಾರೆ. ಈ ಸಂಬಂಧ ಸಭೆಯಲ್ಲಿ ಹಾಜರಿದ್ದ ಸಹಾಯಕ ಕಾರ್ಯಪಾಲಕ ಅಭಿಯಂತರರು ಮಾತನಾಡುತ್ತಾ, ಸದರಿ ವಿಷಯದ ಬಗ್ಗೆ ಸೂಕ್ತ ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿರುತ್ತಾರೆ.
- ಅಂತಿಮವಾಗಿ ಅಧ್ಯಕ್ಷರು ಮಾತನಾಡಿ ಸಕಾದಲ್ಲಿ ಸಾರ್ವಜನಿಕರ ಕುಂದುಕೊರತೆಗಳಗೆ ಸ್ಪಂದಿಸಿ ಪರಿಹರಿಸಲು ಕ್ರಮ ತೆಗೆದುಕೊಂಡು ಎಲ್ಲಾ ಇಲಾಖೆಗೆಗಳು ಸಮನ್ವಯತೆಯಿಂದ ಕೆಲಸ ನಿರ್ವಹಿಸಲು ಸೂಚಿಸಿದರು ಹಾಗು ಹಾಜರಿದ್ದ ಸಾರ್ವಜನಿಕರಿಗೆ ಕಸ ವಿಲೇವಾರಿ ಬಗ್ಗೆ ಆದಷ್ಟು ಗಮನವಹಿಸಿ ಸಹಕರಿಸಿದಲ್ಲಿ ದಿನನಿತ್ಯದ ಕಸ ವಿಲೇವಾರಿ ಸಮಯದಲ್ಲಿ ಸಮರ್ಪಕವಾಗಿ ನಿರ್ವಹಿಸಲು ಗುತ್ತಿಗೆದಾರರು ಸಹಾಯವಾಗುತ್ತದೆ.

ಕಾರ್ಯದರ್ಶಿಯವರು ವಂದನಾರ್ಪಣೆಯೊಂದಿಗೆ ಸಭೆಯನ್ನು ಮುಕ್ತಾಯಗೊಳಸಲಾಯಿತು.

ನೋಡಲ್ ಅಧಿಕಾರಿರವರ ಸೂಚನೆಗಳಂತೆ ನಡವಳಗಳನ್ನು ತಯಾರಿಸಿ ಆನ್‌ಲೈನ್‌ನಲ್ಲಿ ಅಪ್‌ಲೋಡ್ ಮಾಡಲು ಸೂಚಿಸಿರುತ್ತಾರೆ.

(ಪ್ರವೀಣ್.ಎನ್.ಎಂ)
**ಸ.ಅ.&ಕಾರ್ಯದರ್ಶಿ**
**ವಾರ್ಡ್-91, ಭಾರತಿನಗರ**